



ಸೋಮವಾರ ಮುಂಜಾನೆ ನಿಧನರಾದ ಕೇಂದ್ರ ಸಚಿವ ಅನಂತ್‌ಕುಮಾರ್ ಅವರ ಪಾರ್ಥೀವ ಶರೀರವನ್ನು ನಗರದ ಬಿಜೆಪಿ ಕಚೇರಿಗೆ ತಂದ ದೃಶ್ಯ (ಎಡಚಿತ್ರ). ಅಂತಿಮ ದರ್ಶನ ಪಡೆಯಲು ಕಚೇರಿ ಮುಂಭಾಗ ಕಾರ್ಯಕರ್ತರು ಸರತಿ ಸಾಲಿನಲ್ಲಿ ನಿಂತಿದ್ದ ದೃಶ್ಯ (ಮಧ್ಯದ ಚಿತ್ರ). ಅಂತಿಮ ಯಾತ್ರೆ ಚಾಮರಾಜಪೇಟೆ ರುದ್ರಭೂಮಿಗೆ ಸಾಗಿದ ದೃಶ್ಯ.



## ಆಂಬಿಡೆಂಟ್ ವಂಚನೆ ಪ್ರಕರಣ: ಕಾರ್ಪೊರೇಟರ್ ಫರೀದಾ ಪತಿಗಾಗಿ ಸಿಸಿಬಿ ಶೋಧ

**ಬೆಂಗಳೂರು:** ಶಿವಾಜಿನಗರ ವಾರ್ಡ್‌ನ ಕಾರ್ಪೊರೇಟರ್ ಫರೀದಾ ಅವರ ಪತಿ ಮಾಜಿ ರೌಡಿ ಇಸ್ತಿಯಾಕ್‌ಗಾಗಿ ಸಿಸಿಬಿ ಪೊಲೀಸರು ಶೋಧ ನಡೆಸುತ್ತಿದ್ದಾರೆ. ಮಂಗಳವಾರ ಬೆಳಿಗ್ಗೆ ಸಿಸಿಬಿ ಪೊಲೀಸರು ಇಸ್ತಿಯಾಕ್ ಮನೆಗೆ ಧಾವಿಸಿ ಶೋಧ ನಡೆಸಿದ್ದಾರೆ. ಈ ವೇಳೆ ಮಹತ್ವದ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ. ಶೋಧ ಸಂದರ್ಭದಲ್ಲಿ ಇಸ್ತಿಯಾಕ್ ಮನೆಯಲ್ಲಿ ಇರಲಿಲ್ಲ ಎಂದು ಸಿಸಿಬಿ ಪೊಲೀಸರು ತಿಳಿಸಿದ್ದಾರೆ.

**ಇಸ್ತಿಯಾಕ್ ಹಿನ್ನೆಲೆ:** ಒಂದು ಕಾಲದಲ್ಲಿ ಬೆಂಗಳೂರು ಭೂಗತ ಲೋಕದಲ್ಲಿ ಕುಖ್ಯಾತ ರೌಡಿಯಾಗಿದ್ದ ಇಸ್ತಿಯಾಕ್, ಇತ್ತೀಚೆಗೆ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಈ ಹಿಂದೆ ಪಾಲಿಕೆ ಸದಸ್ಯರಾಗಿ ಆಯ್ಕೆಯಾಗಿದ್ದ ಇಸ್ತಿಯಾಕ್, ಈ ಬಾರಿ ತಮ್ಮ ಪತ್ನಿ ಫರೀದಾ ಅವರನ್ನು ಶಿವಾಜಿನಗರ ವಾರ್ಡ್‌ನಿಂದ ಗೆಲ್ಲಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದರು. ರಾಜಕೀಯ ಪ್ರವೇಶ ಪಡೆದ ನಂತರ ರೌಡಿ ಚಟುವಟಿಕೆಗಳನ್ನು ಬಿಟ್ಟಿದ್ದ ಇಸ್ತಿಯಾಕ್, ಕಾಂಗ್ರೆಸ್ ಮುಖಂಡರೊಂದಿಗೆ ಗುರುತಿಸಿಕೊಂಡಿದ್ದಾರೆ.

ಚಿನ್ನದ ಗಟ್ಟಿ ಡೀಲ್ ಪ್ರಕರಣದಲ್ಲಿ ಮಾಜಿ ಸಚಿವ ಜನಾರ್ದನರೆಡ್ಡಿ ಅವರನ್ನು ಬಂಧಿಸಿದ ಬೆನ್ನಲ್ಲೇ ಹಾಗೂ ಆಂಬಿಡೆಂಟ್ ವಂಚನೆ ಪ್ರಕರಣದ ತೀವ್ರ ತನಿಖೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಇಸ್ತಿಯಾಕ್‌ಗಾಗಿ ಶೋಧ ನಡೆಸುತ್ತಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ.

## ರಾಜ್ಯದ ಮೇಲೆ 'ಗಜ' ಚಂಡಮಾರುತದ ಪರಿಣಾಮವಿಲ್ಲ: ಹವಾಮಾನ ಇಲಾಖೆ

**ಬೆಂಗಳೂರು:** ಬಂಗಾಳ ಕೊಲ್ಲಿಯಲ್ಲಿ ಉಂಟಾಗಿರುವ ಗಜ ಚಂಡಮಾರುತದ ಪ್ರಭಾವ ರಾಜ್ಯದ ಮೇಲೆ ಹೆಚ್ಚಿನ ಪರಿಣಾಮ ಬೀರುವುದಿಲ್ಲ ಎಂದು ಕರ್ನಾಟಕ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ನಿರ್ದೇಶಕ ಡಾ. ಜಿ.ಎಸ್. ಶ್ರೀನಿವಾಸ್ ರೆಡ್ಡಿ ತಿಳಿಸಿದರು.

ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ಚಂಡಮಾರುತದಿಂದ ರಾಜ್ಯದ ದಕ್ಷಿಣ ಒಳನಾಡು ಹಾಗೂ ಕರಾವಳಿ ಭಾಗದ ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗಬಹುದು. ಆದರೆ ಭಾರೀ ಮಳೆಯಾಗುವ ಮುನ್ಸೂಚನೆಗಳಿಲ್ಲ ಎಂದರು.

ಚಂಡಮಾರುತವು ತಮಿಳುನಾಡು ಹಾಗೂ ಕೇರಳ ಕಡೆಗೆ ಚಲಿಸುವ ಸಾಧ್ಯತೆಗಳು ಹೆಚ್ಚಾಗಿರುವುದರಿಂದ ನಮ್ಮ ರಾಜ್ಯದಲ್ಲಿ ಹೆಚ್ಚಿನ ಮಳೆಯಾಗುವ ಸಾಧ್ಯತೆ ವಿರಳ. ಚಂಡಮಾರುತದ ಚಲನೆಯ ದಿಕ್ಕು, ವೇಗ ಆಧರಿಸಿ ಮುಂದಿನ ಮುನ್ಸೂಚನೆ ನಿರೀಕ್ಷಿಸಬಹುದಾಗಿದೆ ಎಂದರು. ನ. 15 ಮತ್ತು 16ರಂದು ಮಾತ್ರ ರಾಜ್ಯದ ದಕ್ಷಿಣ ಒಳನಾಡಿನಲ್ಲಿ ಮೋಡ ಕವಿದ ವಾತಾವರಣವಿದ್ದು, ಸಾಧಾರಣ ಮಳೆಯಾಗುವ ಸಂಭವವಿದೆ ಎಂದು ಸ್ಪಷ್ಟಪಡಿಸಿದರು.

# ಜನಸಾಗರದ ನಡುವೆ ಅನಂತ್ ಅಂತಿಮಯಾತ್ರೆ

## ಬಿಜೆಪಿ ಕಚೇರಿಯಲ್ಲಿ ಅಶ್ರುತರ್ಪಣ; ಅಂತಿಮ ದರ್ಶನ

**ಬೆಂಗಳೂರು:** ಕೇಂದ್ರ ಸಚಿವ ಅನಂತ್‌ಕುಮಾರ್ ಅವರ ಪಾರ್ಥಿವ ಶರೀರವನ್ನು ಮಂಗಳವಾರ ಮಲ್ಲೇಶ್ವಂರನಲ್ಲಿರುವ ಬಿಜೆಪಿ ಕಚೇರಿಗೆ ತಂದು ಅಗಲಿದ ನೆಚ್ಚಿನ ನಾಯಕನಿಗೆ ಭಾವ ಪೂರ್ಣ ಶ್ರದ್ಧಾಂಜಲಿ ಅರ್ಪಿಸಲಾಯಿತು. ಜನಸಾಗರದ ನಡುವೆ ಅನಂತ್ ಅಂತಿಮ ಯಾತ್ರೆ ಚಾಮರಾಜಪೇಟೆ ರುದ್ರಭೂಮಿಯ ವರೆಗೆ ಸಾಗಿತು. ಸಾವಿರಾರು ಮಂದಿ ಭಾಗಿಯಾಗಿದ್ದರು.

ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ಎಸ್. ಯಡಿಯೂರಪ್ಪ, ಕೇಂದ್ರ ಸಚಿವರಾದ ಡಿ.ವಿ. ಸದಾನಂದಗೌಡ, ರಮೇಶ್ ಜಿಗಜಿಣಗಿ, ಅನಂತ್‌ಕುಮಾರ್ ಹೆಗ್ಡೆ, ರಾಜ್ಯ ಬಿಜೆಪಿ ಉಸ್ತುವಾರಿ ಮುರಳೀಧರ ರಾವ್, ಮುಖಂಡರಾದ ಕೆ.ಎಸ್. ಈಶ್ವರಪ್ಪ, ಆರ್. ಅಶೋಕ್ ಸೇರಿದಂತೆ ಅನೇಕರು ಮೆಚ್ಚಿನ ನಾಯಕನಿಗೆ ಭಾರವಾದ ಹೃದಯದಿಂದಲೇ ಅಂತಿಮ ನಮನ ಸಲ್ಲಿಸಿದರು. ಪಕ್ಷದ ನೆಲಮಹಡಿಯಲ್ಲಿ ಅವರ ಪಾರ್ಥಿವ ಶರೀರವನ್ನು ಅಂತಿನ ದರ್ಶನಕ್ಕೆ ಇಡಲಾಗಿತ್ತು.

ಬಿಜೆಪಿಯ ಶಾಸಕರು, ಸಂಸದರು, ವಿಧಾನಪರಿಷತ್ ಸದಸ್ಯರು, ಮಾಜಿ ಸಚಿವರು, ಮಾಜಿ ಶಾಸಕರು, ಪದಾಧಿಕಾರಿಗಳು, ಸೇರಿದಂತೆ ಅನೇಕ ಗಣ್ಯರು ಅಂತಿಮ ನಮನ ಸಲ್ಲಿಸಿದರು. ಮೊದಲು ಯಡಿಯೂರಪ್ಪ ದರ್ಶನ ಪಡೆದರೆ, ನಂತರ ಅನಂತ್‌ಕುಮಾರ್ ಪತ್ನಿ, ತೇಜಸ್ವಿನಿ ಅನಂತ್‌ಕುಮಾರ್, ಪುತ್ರಿಯರು, ಕೇಂದ್ರ ಸಚಿವರು, ಶಾಸಕರು, ಸಂಘ ಪರಿವಾರದ ಹಿರಿಯ ನಾಯಕರಾದ ಬಿ.ಎಲ್. ಸಂತೋಷ್, ಅರುಣ್‌ಕುಮಾರ್, ಸರತಿಯಲ್ಲಿ ನಿಂತು ಗೌರವ ಸಲ್ಲಿಸಿದರು. ಸುಮಾರು ಒಂದೂವರೆ ಗಂಟೆಕಾಲ ಬಿಜೆಪಿ ಕಚೇರಿಯಲ್ಲಿ ಅಂತಿಮ ದರ್ಶನಕ್ಕೆ ಅವಕಾಶ ನೀಡಲಾಗಿತ್ತು. ಪ್ರತಿಯೊಬ್ಬರ ಬಾಯಿಯಲ್ಲೂ ಅವರ ನಾಯಕತ್ವದ ಬಗ್ಗೆ ಗುಣಗಾನ ಕೇಳಿಬರುತ್ತಿತ್ತು.



ಕೇಂದ್ರ ಸಚಿವ ಅನಂತ್‌ಕುಮಾರ್ ಅವರ ಪಾರ್ಥೀವ ಶರೀರವನ್ನು ನಗರದ ಬಿಜೆಪಿ ಕಚೇರಿಗೆ ತಂದಾಗ ನೆರೆದಿದ್ದ ಪಕ್ಷದ ಕಾರ್ಯಕರ್ತರು ಹಾಗೂ ಅಭಿಮಾನಿಗಳು.

ಇದಕ್ಕೂ ಮುನ್ನ ಬೆಳಿಗ್ಗೆ 8 ಗಂಟೆಗೆ ಬಸವನಗುಡಿಯಲ್ಲಿರುವ ಸುಮೇರು ನಿವಾಸದಿಂದ ಸೇನಾ ವಾಹನದಲ್ಲಿ 9.15ಕ್ಕೆ ಬಿಜೆಪಿ ಕಚೇರಿಯಿರುವ ಜಗನ್ನಾಥ್ ಭವನಕ್ಕೆ ಅನಂತ್‌ಕುಮಾರ್ ಅವರ ಪಾರ್ಥೀವ ಶರೀರವನ್ನು ತರಲಾಯಿತು. ಪಕ್ಷದ ಮುಖಂಡರು ಮತ್ತಿತರರು ಬರಮಾಡಿಕೊಂಡರು.

ದಾರಿಯ ಇಕ್ಕೆಲಗಳಲ್ಲೂ ಅನಂತ್‌ಕುಮಾರ್ ಅವರ ಪಾರ್ಥಿವ ಶರೀರವನ್ನು ಹೊತ್ತೊಯ್ಯುತ್ತಿದ್ದ ಸೇನಾ ವಾಹನ ನಿಧಾನ ಗತಿಯಲ್ಲಿ ಸಾಗುತ್ತಿತ್ತು. ಈ ವೇಳೆ ದಾರಿಯುದ್ದಕ್ಕೂ ನಿಂತಿದ್ದ ಜನ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿದರು. ಅನಂತ್‌ಕುಮಾರ್ ಅಮರ್ ರಹೇ, ಮತ್ತೇ ಹುಟ್ಟಿ ಬಾ ಎಂಬ ಘೋಷಣೆಗಳನ್ನು ಕೂಗಿದರು. ಬಸವನಗುಡಿಯ ಸುಮೇರು ನಿವಾಸದಿಂದ ಹೊರಟ ವಾಹನ ಎಸ್.ಪಿ. ಸಮಾಜ ರಸ್ತೆ, ಬಸವನಗುಡಿ ಮೆಡಿಕಲ್ ಸೆಂಟರ್, ಲಾಲ್‌ಬಾಗ್ ವೆಸ್ಟ್ ಗೇಟ್, ಆರ್.ವಿ. ರಸ್ತೆ, ಮಿನರ್ವ ಸರ್ಕಲ್, ಶಿವಾಜಿ ವೃತ್ತ, ಎನ್.ಆರ್.ವೃತ್ತ, ಹೈಗ್ರೌಂಡ್ಸ್ ಜಂಕ್ಷನ್, ಪಿ.ಜಿ.ಹಳ್ಳಿ ಜಂಕ್ಷನ್, ಕಾವೇರಿ ಜಂಕ್ಷನ್, ಬಾಷ್ಯಂ ಸರ್ಕಲ್, ಮಾರಮ್ಮ ಸರ್ಕಲ್, ಸಂಪಿಗೆ ರಸ್ತೆ ಮೂಲಕ ಬಿಜೆಪಿ ಕಚೇರಿಗೆ ತೆಗೆದುಕೊಂಡು ಹೋಗಿ ಅಲ್ಲಿ ದರ್ಶನಕ್ಕೆ ಇಡಲಾಯಿತು. ನಂತರ ನ್ಯಾಷನಲ್ ಕಾಲೇಜು ಮೈದಾನಕ್ಕೆ ಮೃತರ ಪಾರ್ಥಿವ ಶರೀರ ತರಲಾಯಿತು. ಅಂತಿಮ ಯಾತ್ರೆ ಚಾಮರಾಜಪೇಟೆ ರುದ್ರಭೂಮಿಗೆ ಸಾಗಿತು.

**ಬಿಗಿಭದ್ರತೆ:** ಅಂತಿಮ ದರ್ಶನದ ವೇಳೆ ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಬಿಜೆಪಿ ಕಚೇರಿ ಬಳಿ ಸೂಕ್ತ ಬಿಗಿ ಭದ್ರತೆ ಕೈಗೊಳ್ಳಲಾಗಿತ್ತು. ಓರ್ವ ಡಿವೈಎಸ್‌ಪಿ, ಐದು ಮಂದಿ ಇನ್ಸ್‌ಪೆಕ್ಟರ್, 20 ಮಂದಿ ಸಬ್‌ಇನ್ಸ್‌ಪೆಕ್ಟರ್, 220 ಮಂದಿ ಪೊಲೀಸರನ್ನು ಭದ್ರತೆಗಾಗಿ ನಿಯೋಜನೆ ಮಾಡಲಾಗಿತ್ತು. ಪ್ರತಿಯೊಬ್ಬರನ್ನು ಬ್ಯಾರಿಕೇಡ್ ಮೂಲಕ ಒಳಬಿಡಲಾಗುತ್ತಿತ್ತು.


## ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮತ್ತೆ ಮುಂದೂಡಿಕೆ?

**ಬೆಂಗಳೂರು:** ರಾಜ್ಯ ಸರ್ಕಾರದ ಪ್ರತಿಷ್ಠಿತ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯುವ ದಿನಾಂಕ ಇನ್ನೂ ನಿಗದಿಯಾಗಿಲ್ಲ. ರಾಜ್ಯದಲ್ಲಿ ಇತ್ತೀಚೆಗೆ ನಡೆದ ಉಪಚುನಾವಣೆ ನೀತಿಸಂಹಿತೆ ಹಿನ್ನೆಲೆಯಲ್ಲಿ ನ. 1ರಂದು ನಡೆಯಬೇಕಿದ್ದ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಮುಂದೂಡಲಾಗಿತ್ತು. ಈ ಬಾರಿ ವಿವಿಧ ಕ್ಷೇತ್ರಗಳ 63 ಗಣ್ಯರನ್ನು ಗುರುತಿಸಿ ರಾಜ್ಯೋತ್ಸವ ಪ್ರಶಸ್ತಿ ನೀಡಲು ಉದ್ದೇಶಿಸಲಾಗಿದೆ.

ರಾಜ್ಯೋತ್ಸವಕ್ಕೂ ಮುನ್ನ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯೋತ್ಸವ ಪ್ರಶಸ್ತಿ ಆಯ್ಕೆ ಸಮಿತಿ ಪ್ರಶಸ್ತಿ ಪುರಸ್ಕೃತರನ್ನು ಆಯ್ಕೆ ಮಾಡಿದ್ದರೂ ಅಧಿಕೃತವಾಗಿ ಪ್ರಕಟಿಸಿಲ್ಲ. ನ. 15ರಂದು ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ ಎಂದು ಪ್ರಸ್ತಾಪವಾಗಿತ್ತಾದರೂ ಅಧಿಕೃತವಾಗಿ ಕಾರ್ಯಕ್ರಮ ನಿರ್ಧಾರವಾಗಿರಲಿಲ್ಲ ಎಂದು ಉನ್ನತ ಮೂಲಗಳು ತಿಳಿಸಿವೆ. ಕೇಂದ್ರ ಸಚಿವ ಅನಂತ್‌ಕುಮಾರ್ ಅವರು ನಿಧನರಾದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಇಂದಿನವರೆಗೂ ಶೋಕಾಚರಣೆ ಘೋಷಣೆ ಮಾಡಿದೆ. ಬೀದರ್‌ನಲ್ಲಿ ಇಂದು ನಡೆಯಬೇಕಿದ್ದ ಸಹಕಾರ ಸಪ್ತಾಹ ಹಾಗೂ ರೈತ ಸ್ಪಂದನಾ ಕಾರ್ಯಕ್ರಮ ನ. 15ಕ್ಕೆ ಮುಂದೂಡಲಾಗಿದೆ. ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ನ. 15ರಂದು ಬೀದರ್ ಪ್ರವಾಸ ಕೈಗೊಳ್ಳಲಿದ್ದಾರೆ. ಹೀಗಾಗಿ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯುವ ದಿನಾಂಕವನ್ನು ಇನ್ನೂ ನಿಗದಿಪಡಿಸಿಲ್ಲ.

## ಶೀಘ್ರವೇ ತ್ಯಾಜ್ಯದಿಂದ ವಿದ್ಯುತ್ ತಯಾರಿಕಾ ಘಟಕ ಸ್ಥಾಪನೆ: ಡಿಸಿಎಂ ಪರಮೇಶ್ವರ್

**ಬೆಂಗಳೂರು:** ತ್ಯಾಜ್ಯದಿಂದ ವಿದ್ಯುತ್ ತಯಾರಿಸುವ ಸಂಬಂಧ ಸತಾರಾಂ ಕಂಪೆನಿಗೆ ಈಗಿರುವ ಕನ್ನಳ್ಳಿ-ಸೀಗೆಹಳ್ಳಿಯಲ್ಲಿ ಪ್ರಾಯೋಗಿಕವಾಗಿ ನಡೆಸಲು ಹಾಗೂ ನೆಲಮಂಗಲದಲ್ಲಿ ಹೊಸದಾಗಿ ವಿದ್ಯುತ್ ತಯಾರಿಕಾ ಘಟಕ ನಿರ್ಮಿಸಲು ಅವಕಾಶ ನೀಡುವ ಸಂಬಂಧ ನಗರಾಭಿವೃದ್ಧಿ ಸಚಿವ ಡಾ. ಜಿ. ಪರಮೇಶ್ವರ್ ಚರ್ಚಿಸಿದರು. ಬಿಬಿಎಂಪಿ ಹಿರಿಯ ಅಧಿಕಾರಿಗಳು ಹಾಗೂ ಸತಾರಾಂ ಕಂಪೆನಿ ಮುಖ್ಯಸ್ಥರೊಂದಿಗೆ ಅವರು ಮಂಗಳವಾರ ಸಭೆ ನಡೆಸಿದರು.



ತ್ಯಾಜ್ಯದಿಂದ ವಿದ್ಯುತ್ ತಯಾರಿಸುವ ಸಂಬಂಧ ಬೆಂಗಳೂರಿನಲ್ಲಿ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ಬಿಬಿಎಂಪಿ ಹಿರಿಯ ಅಧಿಕಾರಿಗಳು ಹಾಗೂ ಸತಾರಾಂ ಕಂಪೆನಿ ಮುಖ್ಯಸ್ಥರೊಂದಿಗೆ ಸಭೆ ನಡೆಸಿದರು.

ಸತಾರಾಂ ಈಗಾಗಲೇ ಚೆನ್ನೈ, ಯೂರೋಪ್, ಬ್ರೆಸಿಲ್ ಸೇರಿದಂತೆ 14ನಲ್ಲಿ ವೇಸ್ಟ್ ಟು ಎನರ್ಜಿ ಪ್ಲಾಂಟ್ ನಡೆಸುತ್ತಿದೆ. ಇದೇ ಮಾದರಿಯಲ್ಲಿ ನೆಲಮಂಗಲದಲ್ಲಿ ಪ್ಲಾಂಟ್ ತೆರೆಯುವ ಸಂಬಂಧ ಪ್ರಾತ್ಯಕ್ಷಿಕೆ ವೀಕ್ಷಿಸಿದ ಪರಮೇಶ್ವರ್ ಅವರು, ಸಂಪೂರ್ಣ ಮಾಹಿತಿ ಪಡೆದರು.

ಹೊಸದಾಗಿ ಪ್ಲಾಂಟ್ ನಿರ್ಮಾಣ ಹೆಚ್ಚು ಸಮಯ ಹಿಡಿಯುವುದಲ್ಲದೆ, ಇದರ ನಿರ್ವಹಣದ ಗುಣಮಟ್ಟ ತಿಳಿಯಲು ಸಮಯ ಬೇಕಾಗಲಿದೆ. ಹೀಗಾಗಿ ಈಗಿರುವ ಸೀಗೆಹಳ್ಳಿ ಹಾಗೂ ಕಲ್ಲಳ್ಳಿ ಪ್ಲಾಂಟ್‌ನಲ್ಲಿಯೇ ಪ್ರಾಯೋಗಿಕವಾಗಿ ಕೆಲಸ ಪ್ರಾರಂಭಿಸುವುದು ಸೂಕ್ತ ಎಂಬ ಅಭಿಪ್ರಾಯ ಹೊರಹಾಕಿದರು. ಒಟ್ಟಾರೆ ಇನ್ನು ಕೆಲವೇ ದಿನಗಳಲ್ಲಿ ವೇಸ್ಟ್ ಟು ಎನರ್ಜಿ ಪ್ಲಾಂಟ್ ನಿರ್ಮಾಣ ಮಾಡುವ ಸಂಬಂಧ ಕ್ಯಾಬಿನೆಟ್‌ನಲ್ಲಿಯು ಶೀಘ್ರವೇ ಒಪ್ಪಿಗೆ ಪಡೆದು ಕನಿಷ್ಠ ಒಂದು ಪ್ಲಾನ್ ನಿರ್ಮಿಸಿ ವಿದ್ಯುತ್ ಉತ್ಪಾದನೆ ಮಾಡಲಾಗುವುದು ಎಂದರು. ಅಪರ ಮುಖ್ಯ ಕಾರ್ಯದರ್ಶಿ ಮಹೇಂದ್ರ ಜೈನ್, ಬಿಎಂಆರ್‌ಡಿಎ ಆಯುಕ್ತ ಮೋಹನ್ ರಾಜ್, ಬಿಡಿಎ ಆಯುಕ್ತ ರಾಜೇಶ್ ಇತರೆ ಅಧಿಕಾರಿಗಳಿದ್ದರು.


NATIONAL RURAL HEALTH MISSION
ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ
ರಾಷ್ಟ್ರೀಯ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಾರ್ಯಕ್ರಮ
NVBDCP
ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳ ಕಛೇರಿ, ಬೆಂಗಳೂರು ನಗರ ಜಿಲ್ಲೆ

ಸಾರ್ವಜನಿಕರೇ ಗಮನಿಸಿ
ಡೆಂಗೀ ಹಾಗೂ ಚಿಕೂನ್‌ಗುನ್ಯ ನಿಯಂತ್ರಣಕ್ಕೆ ಸಹಕರಿಸಿ

ಡೆಂಗೀ ಹಾಗೂ ಚಿಕೂನ್‌ಗುನ್ಯ ಜ್ವರಗಳು ಸೋಂಕು ಹೊಂದಿದ ಈಡೀಸ್ ಈಜಿಪ್ಟೈ ಎಂಬ ಸೊಳ್ಳೆಯ ಕಡಿತದಿಂದ ಬರುತ್ತದೆ. ನಿಂತ ಸ್ವಚ್ಛ ನೀರಿನಲ್ಲಿ ಹುಟ್ಟುವ ಈ ಸೊಳ್ಳೆ ಸಾಧಾರಣವಾಗಿ ಹಗಲಿನಲ್ಲಿ ಕಚ್ಚುತ್ತದೆ. ಈಡೀಸ್ ಈಜಿಪ್ಟೈ ಸೊಳ್ಳೆಯು ತನ್ನ ಜೀವನ ಚಕ್ರವನ್ನು ಪೂರ್ಣಗೊಳಿಸಲು ಸುಮಾರು 8 ರಿಂದ 10 ದಿನಗಳನ್ನು ತಗೆದುಕೊಳ್ಳುತ್ತದೆ. 7 ದಿನಗಳ ಮೊದಲ 3 ಹಂತಗಳು ಚಿತ್ರದಲ್ಲಿ ತೋರಿಸಿದಂತೆ ಹೀಗಿವೆ. ಮೊಟ್ಟೆ, ಲಾರ್ವ, ಪ್ಯೂಪ ಈ ಪ್ರಕ್ರಿಯೆಯು ನೀರಿನಲ್ಲಿ ನಡೆಯುತ್ತದೆ.


**ಲಕ್ಷಣಗಳು :** ಹಠಾತ್ತನೆ ಬರುವ ಅಧಿಕ ಜ್ವರ, ತೀವ್ರ ತಲೆನೋವು, ಕಣ್ಣುಗಳ ಹಿಂಬಾಗಲ್ಲಿ ತೀವ್ರತರ ನೋವು, ಮೈ ನೋವು, ಕೀಲುಗಳಲ್ಲಿ ನೋವು, ವಾಕರಿಕೆ ಮತ್ತು ವಾಂತಿ

**ವೈದ್ಯಕೀಯ ಉಪಚಾರ :** ರೋಗದ ಲಕ್ಷಣ ಕಂಡೊಡನೆ ಉಚಿತ ಚಿಕಿತ್ಸೆಗಾಗಿ ಹತ್ತಿರದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಸ್ಪತ್ರೆಯನ್ನು ಸಂಪರ್ಕಿಸಿ, ವೈದ್ಯರಿಂದ ಪರೀಕ್ಷೆ ಮಾಡಿಸಿ ಸೂಕ್ತ ಚಿಕಿತ್ಸೆ ಪಡೆಯಿರಿ.

**ಮುನ್ನೆಚ್ಚರಿಕೆ :** ಚಿತ್ರದಲ್ಲಿ ತೋರಿಸಿದಂತೆ ಸಿಮೆಂಟ್ ತೊಟ್ಟಿಗಳು, ಪ್ಲಾಸ್ಟಿಕ್ ತೊಟ್ಟಿಗಳು, ಬಕೆಟ್‌ಗಳು, ಡ್ರಂಗಳು, ಬ್ಯಾರಲ್‌ಗಳು, ಖಾಲಿ ಡಬ್ಬಗಳು, ಏರ್‌ಕೂಲರ್‌ಗಳು, ಗಡಿಗೆ. ಗಡಿಗೆ ತುಂಡುಗಳು, ತೆಂಗಿನ ಚಿಪ್ಪುಗಳು, ಹಳೆಯ/ಒಡೆದ ಟೈರ್‌ಗಳು, ಹೀಗೆ ಎಲ್ಲೆಲ್ಲಿ ಸ್ವಚ್ಛನೀರು ನಿಲ್ಲಬಹುದೋ ಅಲ್ಲೆಲ್ಲಾ ಈ ಸೊಳ್ಳೆಗಳು ಹೇರಳವಾಗಿ ಉತ್ಪತ್ತಿಯಾಗುತ್ತವೆ. ಎಲ್ಲಾ ನೀರಿನ ತೊಟ್ಟಿಗಳು, ಡ್ರಂ, ಬ್ಯಾರಲ್‌ಗಳು, ಏರ್ ಕೂಲರ್ ಇತ್ಯಾದಿಗಳನ್ನು ವಾರಕ್ಕೊಮ್ಮೆ ಖಾಲಿ ಮಾಡಿ ಸ್ವಚ್ಛಪಡಿಸಿ. ಮತ್ತೆಭರ್ತಿ ಮಾಡಿಕೊಳ್ಳುವುದು/ಮುಚ್ಚಳದಿಂದ ಮುಚ್ಚುವುದು, ಬಯಲಿನಲ್ಲಿರುವ ತ್ಯಾಜ್ಯ ವಸ್ತುಗಳಾದ ಒಡೆದ ಬಾಟಲಿ ಮುಂತಾದವುಗಳಲ್ಲಿ ಮಳೆ ನೀರು ಸಂಗ್ರಹವಾಗದಂತೆ ಎಚ್ಚರವಹಿಸುವುದು ಅಥವಾ ಸೂಕ್ತ ವಿಲೇವಾರಿ ಮಾಡುವುದು ಅತ್ಯಗತ್ಯ.


ಆರೋಗ್ಯ ಇಲಾಖೆಯಿಂದ ಹಮ್ಮಿಕೊಂಡ ಸೊಳ್ಳೆ ನಿಯಂತ್ರಣ ಕ್ರಮಗಳಿಗೆ ಸಹಕಾರ ನೀಡುವುದು.

ಸ್ವಯಂ ರಕ್ಷಣಾ ವಿಧಾನಗಳಾದ ಸೊಳ್ಳೆ ನಿರೋಧಕಗಳನ್ನು ಹಾಗೂ ಸೊಳ್ಳೆ ಪರದೆಯನ್ನು ಬಳಸುವುದು ಹಾಗೂ ಹಗಲಿನಲ್ಲಿ ಸೊಳ್ಳೆಗಳ ಕಚ್ಚುವಿಕೆಯಿಂದ ದೂರವಿರುವುದು.




ಸೊಳ್ಳೆ ಉತ್ಪತ್ತಿ ತಾಣಗಳು : • ಒಡೆದ ಟೈರ್‌ಗಳು • ತೆಂಗಿನ ಚಿಪ್ಪುಗಳು • ಸಿಮೆಂಟ್ ತೊಟ್ಟಿಗಳು • ತೆರೆದ ಪ್ಲಾಸ್ಟಿಕ್ ಡ್ರಂ • ತೊಟ್ಟಿಗಳು • ಬಕೆಟ್‌ಗಳು • ನೀರಿನ ತೊಟ್ಟಿಗಳು • ಏರ್ ಕೂಲರ್‌ಗಳು • ಹೂವಿನ ಕುಂಡಗಳ ತಟ್ಟೆಗಳು ಇತ್ಯಾದಿಗಳು.

ಸೊಳ್ಳೆಗಳ ಜೀವನ ಚಕ್ರ




ನೀರು ನಿಲ್ಲದಂತೆ ಸಹಕರಿಸಿ – ಸೊಳ್ಳೆ ಉತ್ಪತ್ತಿ ತಡೆಗಟ್ಟಿರಿ

ಅಧ್ಯಕ್ಷರು, ಉಪಾಧ್ಯಕ್ಷರು
ಕಿತ್ತಗನೂರು ಗ್ರಾಮ ಪಂಚಾಯಿತಿ, ಬೆಂಗಳೂರು ಪೂರ್ವ ತಾಲ್ಲೂಕು.
ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು.

ಕಿತ್ತಗನೂರು ಗ್ರಾಮ ಪಂಚಾಯಿತಿ
ಎಲ್ಲಾ ಸದಸ್ಯರುಗಳು
ಆಡಳಿತ ವೈದ್ಯಾಧಿಕಾರಿಗಳು
ಪ್ರಾಥಮಿಕ ಆರೋಗ್ಯ ಕೇಂದ್ರ,




NATIONAL HEALTH MISSION
ಕರ್ನಾಟಕ ಸರ್ಕಾರ
ಜಿಲಾಡಳಿತ, ಜಿಲ್ಲಾ ಪಂಚಾಯತ್
ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ನಗರ ಜಿಲ್ಲೆ

ಕುಷ್ಠರೋಗ ಪತ್ತೆ ಹಚ್ಚುವ ಆಂದೋಲನ


22ನೇ ಅಕ್ಟೋಬರ್ ನಿಂದ 4ನೇ ನವೆಂಬರ್ 2018 ರವರೆಗೆ

ಕೈ ಕೈ ಜೋಡಿಸಿ,



ಕುಷ್ಠ ನಿವಾರಿಸಿ





- ಕುಷ್ಠರೋಗವು ಮೈಕೋಬ್ಯಾಕ್ಟೀರಿಯಂ ಲೆಪ್ರ ಎಂಬ ರೋಗಾಣುವಿನಿಂದ ಬರುತ್ತದೆ.
- ದೇಹದ ಮೇಲೆ ಯಾವುದೇ ಸ್ಪರ್ಶ ಜ್ಞಾನವಿಲ್ಲದ ತಿಳಿಬಿಳಿ ಅಥವಾ ತಾಮ್ರ ಬಣ್ಣದ ಮಚ್ಚೆಗಳು ಕಾಣಿಸುವುದು.
- ಕೈ ಕಾಲುಗಳಲ್ಲಿ ಜೋಮು ಹಿಡಿದು ಸ್ಪರ್ಶ ಜ್ಞಾನವಿಲ್ಲದಿರುವುದು.
- ಮುಖ ಅಥವಾ ಕೈ ಕಾಲುಗಳಲ್ಲಿ ಎಣ್ಣೆ ಸವರಿದಂತೆ ಹೊಳಪು ಇರುವುದು.
- ಮೇಲ್ಕಂಡ ಚಿಹ್ನೆಗಳು ಕಂಡುಬಂದಲ್ಲಿ ಹತ್ತಿರದ ಸರ್ಕಾರಿ ಆಸ್ಪತ್ರೆಗಳಲ್ಲಿ ಪರೀಕ್ಷಿಸಿಕೊಳ್ಳಿರಿ.
- ರೋಗವನ್ನು ಬಹು ಔಷಧಿ ಚಿಕಿತ್ಸೆಯಿಂದ ಸಂಪೂರ್ಣವಾಗಿ ಗುಣಪಡಿಸಬಹುದು.
- ಈ ಬಹು ಔಷಧಿ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ದೊರೆಯುತ್ತದೆ.
  ಪ್ರಾರಂಭಿಕ ಹಂತದಲ್ಲಿ ಗುರ್ತಿಸಿ ಕ್ರಮ ಬದ್ದ ಚಿಕಿತ್ಸೆ ಪಡೆದಲ್ಲಿ ಅಂಗವಿಕಲತೆ ತಡೆಗಟ್ಟಬಹುದು.
- ಚಿಹಿತ್ಸೆ ಅವಧಿ ಕೇವಲ 6 ತಿಂಗಳು ಅಥವಾ 12 ತಿಂಗಳು ಹಾಗೂ ಮನೆಯಲ್ಲಿಯೇ ಚಿಕಿತ್ಸೆ ಪಡೆಯಬಹುದು.
- ಬಹು ಔಷಧಿ ಚಿಕಿತ್ಸೆ : ಉಚಿತ – ಸರಳ ಹಾಗೂ ಪರಿಣಾಮಕಾರಿ

ಉಚಿತವಾಗಿ ಬಹು ಔಷಧಿ ಚಿಕಿತ್ಸೆ ಪಡೆಯಿತಿ ಕುಷ್ಠರೋಗವನ್ನು ತೊಲಗಿಸಿರಿ

ಹೆಚ್ಚಿನ ವಿವರಗಳಿಗೆ ಹತ್ತಿರದ ಸರ್ಕಾರಿ ಆಸ್ಪತ್ರೆಯ ವೈದ್ಯರನ್ನು ಅಥವಾ ಸಿಬ್ಬಂದಿವರ್ಗದವರನ್ನು ಸಂಪರ್ಕಿಸುವುದು.
ಹೆಚ್ಚಿನ ಮಾಹಿತಿಗಾಗಿ 104 ಸಂಖ್ಯೆಗೆ ಉಚಿತ ದೂರವಾಣಿ ಕರೆ ಮಾಹಿತಿ ಪಡೆಯುವುದು.

ಪ್ರಕಟಣೆ :
ಅಧ್ಯಕ್ಷರು /ಉಪಾಧ್ಯಕ್ಷರು /ಸದಸ್ಯರು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು
ಕಿತ್ತಗನೂರು ಗ್ರಾಮ ಪಂಚಾಯಿತಿ, ಬೆಂಗಳೂರು ಪೂರ್ವ ತಾಲ್ಲೂಕು.